**All India Radio: Bangalore**
**Regional Bulletin In Kannada**
**28.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.06.2025 / 2.30 p.m.**
**<><><><>**

ಮುಖ್ಯಾಂಶಗಳು

1. ಚಿಕ್ಕಮಗಳೂರಿನಿಂದ ತಿರುಪತಿಗೆ ವಾರದಲ್ಲಿ ಮೂರು ದಿನ ಸಂಚರಿಸುವ ನೂತನ ರೈಲು ಸಂಚಾರ ಶೀಘ್ರದಲ್ಲೇ ಆರಂಭ
2. ಸ್ವಾವಲಂಬಿ ಭಾರತದ ನಿರ್ಮಾಣಕ್ಕೆ ನಾವಿನ್ಯತೆಯೇ ನೂತನ ಮಾರ್ಗ ; ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
3. ಭದ್ರಾ ಬಲದಂಡೆ ನಾಲೆ ವಿಭಜನೆ ವಿರೋಧಿಸಿ ಬಿಜೆಪಿ ಕರೆ ನೀಡಿದ್ದ ದಾವಣಗೆರೆ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ
4. ಮುಂಗಾರು ಹಂಗಾಮಿನ ಬೆಲೆ ಸಮೀಕ್ಷೆ ಆಪ್‌ನಲ್ಲಿ ವಿವರ ದಾಖಲಿಸಲು ರೈತರಿಗೆ ಮನವಿ

<><><><>

ಚಿಕ್ಕಮಗಳೂರು ನಗರದಿಂದ-ಬೆಂಗಳೂರು ಮೂಲಕ ತಿರುಪತಿಗೆ ನೂತನ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಆದೇಶ ನೀಡಿದ್ದಾರೆ ಎಂದು ಉಡುಪಿ-ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಇದು ಈ ಭಾಗದ ಜನರ ಅನೇಕ ವರ್ಷಗಳ ಬೇಡಿಕೆಯಾಗಿದ್ದು ತಾನು ಸಂಸದನಾಗಿ ಆಯ್ಕೆಯಾದ ನೂರು ದಿನದಲ್ಲಿ ಉಡುಪಿಯಿಂದ-ತಿರುಪತಿಗೆ ಹಾಗೂ ಒಂದು ವರ್ಷದ ಅವಧಿಯಲ್ಲಿ ಚಿಕ್ಕಮಗಳೂರಿನಿಂದ-ತಿರುಪತಿಗೆ ನೂತನ ರೈಲು ಸಂಚಾರ ಸೇವೆ ಆರಂಭಕ್ಕೆ ಶ್ರಮಿಸಿರುವುದಾಗಿ ಅವರು ತಿಳಿಸಿದ್ದಾರೆ. ಚಿಕ್ಕಮಗಳೂರಿನಿಂದ ತಿರುಪತಿ ರೈಲು ಸೇವೆಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಹಲವು ಬಾರಿ ಮನವಿ ಮಾಡಲಾಗಿತ್ತು. ಪ್ರಾಥಮಿಕ ಹಂತದಲ್ಲಿ ವಾರಕೊಮ್ಮೆ ಚಿಕ್ಕಮಗಳೂರಿನಿಂದ ತಿರುಪತಿಗೆ ರೈಲು ಸಂಚಾರ ಆರಂಭಗೊಳ್ಳಲಿದ್ದು ನಂತರ ವಾರಕ್ಕೆ ೩ ದಿನ ರೈಲು ಸಂಚರಿಸಲಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಪ್ರಪಂಚದಾದ್ಯಂತ ಸ್ಪರ್ಧೆಯು ಉತ್ತುಂಗದಲ್ಲಿರುವ ಇಂದಿನ ಸಮಯದಲ್ಲಿ, ಭಾರತವನ್ನು ಸ್ವಾವಲಂಬಿಯನ್ನಾಗಿ ಮತ್ತು ಜಾಗತಿಕ ನಾಯಕನನ್ನಾಗಿ ಮಾಡಲು ನಾವೀನ್ಯತೆಯ ಶಕ್ತಿಯ ಮೂಲಕ ಮಾತ್ರ ಸಾಧ್ಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿ ಕೈಗಾರಿಕಾ ನಾವೀನ್ಯತೆ ಮತ್ತು ಸಂಶೋಧನಾ ಮಂಡಳಿ ಮತ್ತು ಜೈನ್ ಡೀಮ್ಡ್ ವಿಶ್ವವಿದ್ಯಾಲಯ ಬೆಂಗಳೂರು ಆಯೋಜಿಸಿದ್ದ ಆವಿಷ್ಕಾರ, ಬೌದ್ಧಿಕ ಸಂಪತ್ತು ಮತ್ತು ಉದ್ಯಮಾಧಾರಿತ ಬೆಳವಣಿಗೆಗೆ ರಾಷ್ಟ್ರಮಟ್ಟದ ಆಂದೋಲನ "ಇನೋವಸ್ಥಾನ್-ವಿಚಾರದಿಂದ ವಿಕಾಸ ಯಾತ್ರೆ"ಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. "ಭಾರತದಲ್ಲಿ ನಾವೀನ್ಯತೆ ಕೇವಲ

ಪ್ರಯೋಗಾಲಯಕ್ಕೆ ಸೀಮಿತವಾಗಿಲ್ಲ, ಬದಲಾಗಿ ನಾವು ಅದನ್ನು ನೀತಿ, ಶಿಕ್ಷಣ, ಕೈಗಾರಿಕೆ ಮತ್ತು ಸಮಾಜದ ಭಾಗವಾಗಿಸುತ್ತಿದ್ದೇವೆ. ರಾಜ್ಯದಿಂದ ಪ್ರಾರಂಭವಾದ ಈ "ವಿಚಾರದಿಂದ ವಿಕಾಸ ಯಾತ್ರೆ" ನಮ್ಮ ಗೌರವಾನ್ವಿತ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಸ್ವಾವಲಂಬಿ ಭಾರತ ಮತ್ತು ನಾವೀನ್ಯತೆ ಆಧಾರಿತ ರಾಷ್ಟ್ರವನ್ನು ನಿರ್ಮಿಸುವ ಸಂಕಲ್ಪದಿಂದ ಪ್ರೇರಿತವಾಗಿದೆ ಎಂದು ಅವರು ಹೇಳಿದರು.

<><><>

ಧಾರವಾಡದಲ್ಲಿ ನಾಳೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋ? ಲಾಡ್ ನೇತೃತ್ವದಲ್ಲಿ, 'ನಮ್ಮ ನಗರ, ನವ ಸ್ವಚ್ಛತೆ' ಅಭಿಯಾನ ಜರುಗಲಿದೆ. ಸ್ವಚ್ಛತಾ ಅಭಿಯಾನದಲ್ಲಿ ಧಾರವಾಡ ನಗರದ ನಾಲ್ಕು ವಲಯಗಳ, ಏಳು ವಾರ್ಡ್‌ಗಳ ೧೬ ಸ್ಥಳಗಳು ಸೇರಿ, ಒಟ್ಟು ೧೩ ಕಿಲೋ ಮೀಟರ್ ಉದ್ದದ ರಸ್ತೆ, ಚರಂಡಿಗಳನ್ನು ಏಕಕಾಲP ಸ್ವಚ್ಛಗೊಳಿಸುವ ಯೋಜನೆ ರೂಪಿಸಲಾಗಿದೆ. ಬ್ಲ್ಯಾಕ್ ಸ್ಪಾಟ್ ಗುರುತಿಸಿ ಸ್ವಚ್ಛಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಾ ಪ್ರಭು ತಿಳಿಸಿದ್ದಾರೆ. ಎಲ್ಲ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಮಹಾನಗರ ಪಾಲಿಕೆ ಸಿಬ್ಬಂದಿ, ಪೌರಕಾರ್ಮಿಕರು, ಎನ್.ಎಸ್.ಎಸ್ ಹಾಗೂ ಎನ್.ಸಿ.ಸಿ ಸ್ವಯಂಸೇವಕರು ಸ್ವಚ್ಛತಾ ಅಭಿಯಾನದಲ್ಲಿ ಭಾಗವಹಿಸಲಿದ್ದಾರೆ.

<><><>

ಭದ್ರಾ ಬಲದಂಡೆ ನಾಲೆಯನ್ನು ವಿಭಜಿಸಿ ಚಿಕ್ಕಮಗಳೂರು, ತರೀಕೆರೆ, ಹೊಸದುರ್ಗ ನಗರಗಳಿಗೆ ನೀರು ಹರಿಸುವ ಯೋಜನೆ ವಿರೋಧಿಸಿ ಬಿಜೆಪಿ ಮತ್ತು ರೈತ ಸಂಘಟನೆಗಳು ಕರೆ ನೀಡಿದ್ದ ದಾವಣಗೆರೆ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಪ್ರತಿಭಟನಾಕಾರರು ಅಂಗಡಿ, ಮುಂಗಟ್ಟುಗಳನ್ನು ಬಲವಂತವಾಗಿ ಮುಚ್ಚಿಸಲು ಯತ್ನಿಸಿದರು. ಇದರಿಂದ ಕೆಲಕಾಲ ಗೊಂದಲ ಉಂಟಾಯಿತು. ನಂತರ ನಗರದ ಪ್ರಮುಖ ವೃತ್ತಗಳಲ್ಲಿ ಟಯರ್‌ಗಳಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಬಸ್ ಮತ್ತು ಇತರ ವಾಹನ ಸಂಚಾರ ಎಂದಿನಂತೆ ಇತ್ತಾದರೂ ಜನದಟ್ಟಣೆ ಕಡಿಮೆ ಇರುವುದು ಕಂಡು ಬಂತು. ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿತ್ತು.

<><><>

೨೦೨೫-೨೬ನೇ ಸಾಲಿನ ಪೂರ್ವ ಮುಂಗಾರು ಮತ್ತು ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಗೆ ರೈತರ ಆಪ್‌ನಲ್ಲಿ ಸ್ವತಃ ರೈತರೇ ತಮ್ಮ ಜಮೀನಿನಲ್ಲಿ ತಾವು ಬೆಳೆದ ಬೆಳೆಯ ವಿವರವನ್ನು ದಾಖಲಿಸಬಹುದಾಗಿದೆ. ಮುಂಗಾರು ರೈತರ ಬೆಳೆ ಸಮೀಕ್ಷೆ ೨೦೨೫ ಎಂಬ ಹೆಸರಿನ ಆಪ್ ಅನ್ನು ರೈತರು ಗೂಗಲ್ ಪ್ಲೇ-ಸ್ಟೋರ್ ನಿಂದ ಡೌನ್‌ಲೋಡ್ ಮಾಡಿಕೊಂಡು ಆರ್ಥಿಕ ವರ್ಷ ಮತ್ತು ಋತು ದಾಖಲಿಸಬೇಕು. ನಂತರ ರೈತರ ಹೆಸರು ಮತ್ತು ಮೊಬೈಲ್ ಸಂಖ್ಯೆ ನಮೂದಿಸಿ, ಮೊಬೈಲ್ ಸಂಖ್ಯೆಗೆ ಬರುವ ಒಟಿಪಿಯೊಂದಿಗೆ ನೋಂದಣಿ ಮಾಡಿಕೊಂಡು, ಮಾಸ್ಟರ್ ವಿವರ ಮತ್ತು ಮಾಲೀಕರ ವಿವರ ಡೌನ್ ಲೋಡ್ ಮಾಡಿಕೊಳ್ಳಬೇಕು. ಸರ್ವೆ ನಂಬರ್ ಹಾಗೂ ಮಾಲೀಕರ ಹೆಸರನ್ನು ಆಯ್ಕೆ ಮಾಡಿ ಕ್ಷೇತ್ರವನ್ನು ನಮೂದಿಸಬೇಕು. ಅಪ್‌ಲೋಡ್ ಮಾಡಲಾದ ಬೆಳೆ ಮಾಹಿತಿಯನ್ನು ಪ್ರತಿ ಗ್ರಾಮಕ್ಕೆ ನೇಮಿಸಲಾದ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ ಅನುಮೋದಿಸುತ್ತಾರೆ. ಈ ಮಾಹಿತಿಯನ್ನು ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಕನಿಷ್ಠ ಬೆಂಬಲ ಬೆಲೆ ಮತ್ತು ಸರ್ಕಾರದ ವಿವಿಧ ಯೋಜನೆಗಳಡಿ ಸವಲತ್ತುಗಳನ್ನು ಒದಗಿಸಲು ಆರ್‌ಟಿಸಿಯಲ್ಲಿ ಅಳವಡಿಸಲು ಬಳಸಲಾಗುತ್ತದೆ. ಬೆಳೆ ವಿವರಗಳನ್ನು ಅಪ್‌ಲೋಡ್

ಮಾಡದಿದ್ದಲ್ಲಿ ಇಲಾಖೆಗಳಿಂದ ದೊರೆಯುವ ಸೌಲಭ್ಯದಿಂದ ವಂಚಿತರಾಗುವ ಸಾಧ್ಯತೆಯಿದ್ದು, ಜಿಲ್ಲೆಯ ರೈತರು ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ.

<><><>

ದೇಶದ ಮೊದಲ ಸ್ವಿಚ್ ಗೇರ್ ಉತ್ಪಾದನಾ ಸಂಸ್ಥೆ ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರಿಸ್ ಲಿಮಿಟೆಡ್ ಸಂಸ್ಥೆ - ವತಿಯಿಂದ ಸರ್ಕಾರಕ್ಕೆ ಡಿವಿಡೆಂಡ್ ಚೆಕ್ ಸಲ್ಲಿಕೆ ಮಾಡಲಾಗಿದೆ. ೩ ಕೋಟಿ ರೂಪಾಯಿಗಳಷ್ಟು ನಷ್ಟಕ್ಕೆ ಸಿಲುಕಿದ್ದ ಎಂಇಐ ಸಂಸ್ಥೆಗೆ ಬೀಗ ಹಾಕಲು ಈ ಹಿಂದೆ ವರದಿ ನೀಡಲಾಗಿತ್ತು. ಸರ್ಕಾರದ ನಿರ್ಧಾರದಿಂದ ಕಂಗಾಲಾಗಿದ್ದ ಸುಮಾರು ೪೦೦ಕ್ಕೂ ಹೆಚ್ಚು ಕಾರ್ಮಿಕರು ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಗೆ ಅಧ್ಯಕ್ಷ ಎಸ್. ಮನೋಹರ್ ಹೊಸ ಚೈತನ್ಯ ತುಂಬಿದ್ದರು. ನಷ್ಟದಲ್ಲಿದ್ದ ಸಂಸ್ಥೆ ಪ್ರಸ್ತುತ ೨೫ ಕೋಟಿ ರೂಪಾಯಿಗೂ ಅಧಿಕ ಲಾಭದತ್ತ ಸಾಗಿದ್ದು, ವಾರ್ಷಿಕ ೩೦೦ಕೋಟಿ ರೂಪಾಯಿ ವಹಿವಾಟು ನಡೆಸುತ್ತಿದೆ.

<><><>

ನಾರಾಯಣಪುರ ಅಣೆಕಟ್ಟೆ ಜಲಾನಯನ ಪ್ರದೇಶದಲ್ಲಿ ಉಂಟಾಗುತ್ತಿರುವ ಮಳೆಯಿಂದಾಗಿ ಮತ್ತು ಆಲಮಟ್ಟಿ ಅಣೆಕಟ್ಟೆಯಿಂದ ನೀರು ಬಿಡುತ್ತಿರುವುದರಿಂದ ಜಲಾನಯನ ಪ್ರದೇಶದ ಕೆಳಭಾಗದಲ್ಲಿರುವ ಜನರಿಗೆ ಎಚ್ಚರಿಕೆ ಸಂದೇಶ ನೀಡಲಾಗಿದೆ. ಅಣೆಕಟ್ಟಿನ ಪ್ರಸ್ತುತ ನೀರಿನ ಸಂಗ್ರಹವು ಶೇಕಡ ೮೦ ರಷ್ಟಿದ್ದು, ಕೃಷ್ಣಾ ನದಿಗೆ ೮೪ ಸಾವಿರದ ೪೪೫ ಕ್ಯೂಸೆಕ್ ನೀರು ಬಿಡಲಾಗುತ್ತಿದೆ. ನಾರಾಯಣಪುರ ಅಣೆಕಟ್ಟೆಗೆ ಸುಮಾರು ೧ ಲಕ್ಷದ ೧೦ ಸಾವಿರ ಕ್ಯೂಸೆಕ್ ನೀರಿನ ಒಳಹರಿವು ಇರುವ ಸಾಧ್ಯತೆ ಇದ್ದು, ಪ್ರಸ್ತುತ ಇರುವ ಹೊರಹರಿವನ್ನು ೮೪ ಸಾವಿರದ ೪೪೫ ಕ್ಯೂಸೆಕ್‌ನಿಂದ ೧ ಲಕ್ಷದ ೧೦ ಸಾವಿರದ ಕ್ಯೂಸೆಕ್‌ಗೆ ಹಂತ ಹಂತವಾಗಿ ಹೆಚ್ಚಿಸಲಾಗುವುದು ಎಂದು ತಿಳಿಸಲಾಗಿದೆ. ನಾರಾಯಣಪುರ ಅಣೆಕಟ್ಟಿನ ಕೆಳಭಾಗದಲ್ಲಿರುವ ನದಿ ಪಾತ್ರದ ಜನ ಜಾನುವಾರು ಜಾಗ್ರತೆಯಿಂದ ಇರಲು ಎಚ್ಚರಿಕೆ ನೀಡಲಾಗಿದೆ.

<><><>

ಬಳ್ಳಾರಿಯ ಪ್ರಧಾನ ಅಂಚೆ ಕಛೇರಿಯಲ್ಲಿ ನಗರಕ್ಕೆ ಸಂಬಂಧಿಸಿದ ಎಲ್ಲಾ ಅಂಚೆಗಳನ್ನು ಬಟವಾಡೆ ಮಾಡುವ ಕೇಂದ್ರವನ್ನು ಉಪ ವಿಭಾಗದ ಅಧೀಕ್ಷಕ ಪಿ ಚಿದಾನಂದ ಉದ್ಘಾಟನೆ ಮಾಡಿದರು. ಈ ವೇಳೆ ಮಾತನಾಡಿದ ಅವರು ಈ ಕೇಂದ್ರವು ಪ್ರಧಾನ ಅಂಚೆ ಕಚೇರಿ, ಗಾಂಧಿನಗರ, ಕೌಲ್ ಬಜಾರ್, ಕಂಟೋನ್ಮೆಂಟ್, ಜ್ಞಾನಸಾಗರ, ಅಲ್ಲಿಪುರ, ಬಂಡಿಹಟ್ಟಿ, ಕಾಕಾರ್ಲ್ ತೋಟ, ಸಂಗನಕಲ್ಲು ಅಂಚೆ ಕಚೇರಿಗಳಿಂದ ಬಟವಾಡೆ ಮಾಡಲಾಗುತ್ತಿದ್ದುದನ್ನು ಒಂದಡೆ ಮಾಡಲಾಗಿದೆ. ಬಳ್ಳಾರಿ ಪ್ರಧಾನ ಅಂಚೆ ಕಚೇರಿಯಲ್ಲಿ 'ಸಂಜೆ ಅಂಚೆ' ಸೇವೆಯನ್ನು ಒದಗಿಸಿದ್ದು, ಸಂಜೆ ೪ ರಿಂದ ೭.೩೦ ರವರೆಗೆ ತಮ್ಮ ರಿಜಿಸ್ಟರ್ಡ್ ಪೋಸ್ಟ್, ಸ್ಪೀಡ್ ಪೋಸ್ಟ್, ಪಾರ್ಸೆಲ್ ಮತ್ತು ಅಂಚೆ ಚೀಟಿ ಮಾರಾಟದ ವ್ಯವಸ್ಥೆಯನ್ನು ಮಾಡಲಾಗಿದ್ದು, ಅಂಚೆ ಗ್ರಾಹಕರು ಇದರ ಸದುಪಯೋಗವನ್ನು ಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

<><><>

ಸಂಕ್ಷಿಪ್ತ ಸುದ್ದಿಗಳು

1. ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ನಾಡಹಬ್ಬ ಮೈಸೂರು ದಸರಾ-೨೦೧೫ ಆಚರಣೆ ಕುರಿತು ವಿಧಾನಸೌಧ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಸಿದರು. ಸಚಿವರಾದ ಎಚ್.ಸಿ.ಮಹದೇವಪ್ಪ,

ಕೆ.ಜೆ.ಜಾರ್ಜ್, ಶಿವರಾಜ ತಂಗಡಗಿ, ಕೆ. ವೆಂಕಟೇಶ್, ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತಾ, ಮುಖ್ಯಮಂತ್ರಿ ಅವರ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಜಿ.ಟಿ.ದೇವೇಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

2. ದಾಬಸ್ ಪೇಟೆಯ ಕೈಗಾರಿಕಾ ಪ್ರದೇಶದಲ್ಲಿ ಇಂದು ನಡೆದ ಕಾಸಿಯಾ ಶ್ರೇಷ್ಠತಾ ಮತ್ತು ನಾವೀನ್ಯತಾ ಕೇಂದ್ರ ಮತ್ತು ವಸ್ತು ಪ್ರದರ್ಶನಾ ಕೇಂದ್ರ ಕಟ್ಟಡಗಳ ಉದ್ಘಾಟನಾ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಿದ್ದರು.

3. ಪಂಡರಾಪುರ ಕ್ಷೇತ್ರದಲ್ಲಿ ನಡೆಯುವ ಆಷಾಢ ಏಕಾದಶಿ ಜಾತ್ರೆಯಲ್ಲಿ ಪಾಲ್ಗೊಳ್ಳುವ ಯಾತ್ರಾರ್ಥಿಗಳಿಗೆ ಅನುಕೂಲಕರ ಪ್ರಯಾಣವನ್ನು ಕಲ್ಪಿಸಲು ಭಾರತೀಯ ರೈಲ್ವೆಯು ಕರ್ನಾಟಕದ ಹುಬ್ಬಳ್ಳಿ ಮತ್ತು ಮಹಾರಾಷ್ಟ್ರದ ಪಂಡರಾಪುರ ನಡುವೆ ೧೪ ಹೆಚ್ಚುವರಿ ಕಾಯ್ದಿರಿಸದ ವಿಶೇಷ ರೈಲುಗಳನ್ನು ಜುಲೈ ೧ ರಿಂದ ೮ ರವರೆಗೆ ಹೊರಡಿಸಲಿದೆ ಎಂದು ಕೇಂದ್ರ ರೈಲ್ವೆಯ ಸೊಲ್ಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>